ಹಿ.ಆ.ನ.,(ಮ), (ಮ) ಹುದ್ದೆಗಳನ್ನು ಶೀಘ್ರದಲ್ಲಿಯೇ ಪದೋನ್ನತಿ ಮೂಲಕ ಭರ್ತಿ ಮಾಡಲಾಗುವುದು.

3676(4737); ಶ್ರೀ ಅಂಗಾರ ಎಸ್.(ಸುಳ್ಯ); ಶ್ರೀ ಆರ್.ರಾಮಲಿಂಗಾರೆಡ್ಡಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು); ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರು.

ಅ) ಸುಳ್ಯ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿರುವ ಎಲ್ಲಾ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಾಗಿ ತರಗತಿ ನಡೆಸಲು ಸರಿಯಾದ ಕೊಠಡಿಗಳ ವ್ಯವಸ್ಥೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದರೆ, ಯಾವ ಕ್ರಮವನ್ನು ಎಷ್ಟು ಸಮಯದಲ್ಲಿ ತೆಗೆದುಕೊಳ್ಳಲಾಗುವುದು;

ಶ್ರೀ ಆರ್.ರಾಮಲಿಂಗಾರೆಡ್ಡಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಸುಳ್ಯ ವಿಧಾನಸಭಾ ಕ್ಷೇತ್ರದಲ್ಲಿ 5 ಸರ್ಕಾರಿ ಪದವೀ ಪೂರ್ವ ಕಾಲೇಜುಗಳಿದ್ದು, ಎಲ್ಲಾ ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಾಗಿರುವುದು ಹಾಗೂ ಕೊಠಡಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆ.

ಆ) ನಬಾರ್ಡ್ ಸಂಸ್ಥೆಯ ಆರ್.ಐ.ಡಿ.ಎಫ್. ಯೋಜನೆಯಡಿಯಲ್ಲಿ ಸದರಿ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಈ ಸರ್ಕಾರಿ ಪ.ಪೂ.ಕಾಲೇಜುಗಳಿಗೆ ಕೊಠಡಿಗಳನ್ನು ಒದಗಿಸಲು ಕ್ರಮಕೈಗೊಳ್ಳಲಾಗುತ್ತಿದ್ದು ನಬಾರ್ಡ್‌ನಿಂದ ಅನುಮೋದನೆ ದೊರೆತ ಕೂಡಲೇ ಸದರಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗುವುದು.

3677(4096); ಶ್ರೀ ಅನಿಫ್ ಹೆಚ್.ಲಾಡ್(ಕೂಡ್ಲಿಗಿ); ಮಾನ್ಯ ಡಾ॥ ಹೆಚ್.ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು); ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರು.

ಅ) ಬಳ್ಳಾರಿ ಜಿಲ್ಲೆಯ ಕೂಡ್ಲಿಗಿ ವಿಧಾನಸಭಾ ಕ್ಷೇತ್ರದಲ್ಲಿ ಎಷ್ಟು ಪ್ರಾಥಮಿಕ ಆರೋಗ್ಯ ಘಟಕಗಳಿವೆ;

ಆ) ಇವುಗಳನ್ನು ಮೇಲ್ದರ್ಜೆಗೆ ಏರಿಸಲು ಪ್ರಸ್ತಾವನೆ ಇದೆಯೇ;

ಇ) ಕೂಡ್ಲಿಗಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಗೆ ಬರುವ ಎಷ್ಟು ಹಳ್ಳಿಗಳಲ್ಲಿ ಪ್ರಾಥಮಿಕ ಆರೋಗ್ಯ ಘಟಕಗಳು ಇರುವುದಿಲ್ಲ.